**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾಹಿತಿ.**

**ಪ್ರಶ್ನೆ:-**

ತೋಳಗಳ ವಾಸಸ್ಥಳದಲ್ಲಿ ಮರಳು ದಂಧೆಕೋರರ ದರ್ಬಾರ್ ತೋಳಧಾಮದ ಸಂರಕ್ಷಿತ ಪ್ರದೇಶಕ್ಕೆ ಮರಳು ಮಾಫಿಯಾದ ಕಂಟಕ ಎಂಬ ಶೀರ್ಷಿಕೆಯಡಿಯಲ್ಲಿ ಪ್ರಕಟವಾಗಿರುವ ಸಿದ್ದಿಯ ಸಂಬಂಧ ರಾಜ್ಯ ಸರ್ಕಾರವು ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ ಬಂಕಾಪುರ, ಕರಡಿಗುಡ್ಡ ಹಾಗೂ ಇತ್ಯಾದಿ ಗ್ರಾಮಗಳನ್ನು ಒಳಗೊಂಡ ಪ್ರದೇಶವನ್ನು ತೋಳಧಾಮ ಎಂದು ಘೋಷಿಸಿ ಸಂರಕ್ಷಿತ ಪ್ರದೇಶವನ್ನಾಗಿ ಮಾಡಿದೆ. ಆದರೆ, ಇದೇ ಸಂರಕ್ಷಿತ ಪ್ರದೇಶದಲ್ಲಿ ರಾತ್ರಿ ವೇಳೆ ಆಕ್ರಮ ಮರಳು ದಂಧೆ ಎಗ್ಗಿಲ್ಲದೆ ನಡೆಯುತ್ತಿದ್ದು, ಪರಿಸರ ಮತ್ತು ವನ್ಯಜೀವಿಗಳಿಗೆ ತೀವ್ರ ತೊಂದರೆಯಾಗುತ್ತಿದೆ. ದಂಧೆಕೋರರು ರಾತ್ರಿವೇಳೆ ಮರಳು ಆಗೆಯುವುದರಿಂದ ಪ್ರಾಣಿ-ಪಕ್ಷಿಗಳಿಗೆ ತೀವ್ರ ತೊಂದರೆಯಾಗುತ್ತಿದೆ. ರಾಂಪುರ ಮತ್ತು ರಾಮದುರ್ಗ ಕೆರೆಗಳಿಂದ ಮಣ್ಣು ತೆಗೆದುಕೊಂಡು ಬಂದು, ಅದನ್ನು ಫಿಲ್ಟರ್ ಮಾಡಿ ಮರಳನ್ನಾಗಿ ಪರಿವರ್ತಿಸಿ, ಭಾರೀ ಬೆಲೆಗೆ ಮಾರಾಟ ಮಾಡುವ ದಂಧೆ ಅವ್ಯಾಹತವಾಗಿ ನಡೆಯುತ್ತಿದೆ. ಮರಳು ದರ ಏರಿಕೆ ಒಂದೆಡೆಯಾದರೆ, ಈ ಅಕ್ರಮ ಮರಳುಗಾರಿಕೆಯಿಂದ ಸಾರ್ವಜನಿಕರಿಗೆ ಆನೇಕ ತೊಂದರೆಗಳಾಗುತ್ತಿವೆ.

ಮರಳು ದಂಧೆ ನಿಯಂತ್ರಣಕ್ಕೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕಿದೆ. ಹೊರ ಜಿಲ್ಲೆ ಮತ್ತು ಹೊರ ರಾಜ್ಯಗಳಿಗೆ ಮರಳು ಸಾಗಾಟವಾಗದಂತೆ ತಡೆಯುವುದು, ಅಕ್ರಮ ಸಾಗಾಟ ಮಾಡುವ ಲಾರಿಗಳನ್ನು ಮುಟ್ಟುಗೋಲು ಹಾಕಿ ದಂಧೆ ಕೋರರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸುವುದು ಅಗತ್ಯವಾಗಿದೆ. ಆದರೆ, ಸ್ಥಳೀಯ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಕ್ರಮ ಕೈಗೊಳ್ಳಲು ಹಿಂಜರಿಯುತ್ತಿರುವುದು ಹಲವು ಅನುಮಾನಗಳಿಗೆ ಎಡೆಮಾಡಿದೆ.

ಮರಳು ಮಾಫಿಯಾವನ್ನು ನಿಯಂತ್ರಿಸುವಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ನಿರ್ಲಕ್ಷ್ಯತನ ಸಾರ್ವಜನಿಕರಲ್ಲಿ ಹಲವು ಅನುಮಾನಗಳಿಗೆ ಎಡೆ ಮಾಡಿದೆ. ಸಾರ್ವಜನಿಕ ಮತ್ತು ಪರಿಸರದ ಹಿತದೃಷ್ಟಿಯಿಂದ ಕೂಡಲೇ ಅಧಿಕಾರಿಗಳು ಕಠಿಣ ಕ್ರಮ ಕೈಗೊಳ್ಳಬೇಕಿದೆ. ಅಕ್ರಮ ಮರಳುಗಾರಿಕೆ ಮೇಲೆ ನಡೆಯುವ ದಾಳಿಗಳು ಕೇವಲ ಮಾಮೂಲು ಮತ್ತು ಇದರ ಪ್ರಯೋಜನ ಶೂನ್ಯವಾಗಿದೆ ದಾಳಿ ನಡೆದ ಒಂದೆರಡು ದಿನಗಳಲ್ಲಿಯೇ ಮತ್ತೆ ಮರಳುಗಾರಿಕೆ ಅವ್ಯಾಹತವಾಗಿ ನಡೆಯುತ್ತದೆ. ದಾಳಿ ನಡೆಸುವ ಮುನ್ನ ಮರಳು ಉದ್ಯಮಿಗಳಿಗೆ ಮಾಹಿತಿ ನೀಡಿಯೇ ದಾಳಿ ನಡೆಸುವಂತಹ ಪ್ರಸಂಗಗಳೂ ಇವೆ. ದಾಳಿ ಮಾಡಿದ ಎಷ್ಟು ಪ್ರಕರಣಗಳಲ್ಲಿ ಯಾವ ಪ್ರಮಾಣದಲ್ಲಿ ದಂಡ ವಿಧಿಸಲಾಯಿತು? ಕಾನೂನಾತ್ಮಕವಾಗಿ ಏನು ಕ್ರಮ ಕೈಗೊಳ್ಳಲಾಯಿತು? ಎಂಬ ಪ್ರಶ್ನೆಗಳಿಗೆ ಅಧಿಕಾರಿಗಳು ಮಾಹಿತಿ ನೀಡುತ್ತಿಲ್ಲ. ಈ ಕುರಿತು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ಗೃಹ ಸಚಿವರು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ತಮ್ಮ ಮೂಲಕ ಒತ್ತಾಯ ಮಾಡಿ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

**ಉತ್ತರ:-**

ಕೊಪ್ಪಳ ಜಿಲ್ಲೆ ಕನಕಗಿರಿ ತಾಲ್ಲೂಕು ಕನಕಗಿರಿ, ಬಂಕಾಪುರ ಹಾಗೂ ಕರಡಿಗುಡ್ಡ ಗ್ರಾಮ ವ್ಯಾಪ್ತಿಯಲ್ಲಿ ಯಾವುದೇ ನದಿ ಪಾತ್ರಗಳು ಮತ್ತು ಸದರಿ ಗ್ರಾಮಗಳ ವ್ಯಾಪ್ತಿಯಲ್ಲಿ I, II ಮತ್ತು III ನೇ ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ಮರಳು ಲಭ್ಯತೆ ಇಲ್ಲದೆ ಇರುವುದರಿಂದ, ಯಾವುದೇ ಮರಳು ಬ್ಲಾಕ್‌ಗಳನ್ನು ಗುರುತಿಸಿರುವುದಿಲ್ಲ.

ಕೊಪ್ಪಳ ಜಿಲ್ಲೆ ಕನಕಗಿರಿ ತಾಲ್ಲೂಕು ಕನಕಗಿರಿ, ಬಂಕಾಪುರ, ಕರಡಿಗುಡ್ಡ ಹಾಗೂ ಸದರಿ ಗ್ರಾಮಕ್ಕೆ ಹೊಂದಿಕೊಂಡಿರುವ ಬಸರಿಹಾಳ, ಚಿಕ್ಕವಡ್ಡರಕಲ್ಲು ಮತ್ತು ಸಿದ್ದಿಕೇರೆ ಇತರೆ ಗ್ರಾಮಗಳ ವ್ಯಾಪ್ತಿಯ ಕೆರೆ ಮತ್ತು ಕುಂಟೆಗಳಲ್ಲಿ ದೊರೆಯುವ ಮರಳು ಮಿಶ್ರಿತ ಮಣ್ಣನ್ನು ತೆಗೆದು ಪಟ್ಟಾ ಜಮೀನುಗಳಲ್ಲಿ ಸಂಗ್ರಹಿಸಿ, ಮರಳು ಮಿಶ್ರಿತ ಮಣ್ಣನ್ನು ನೀರಿನಿಂದ ತೊಳೆದು ರಾತ್ರಿ ವೇಳೆಯಲ್ಲಿ ವಾಹನಗಳಲ್ಲಿ ಸಾಗಾಣಿಕೆ ಮಾಡುತ್ತಿರುವ ಪ್ರಕರಣಗಳನ್ನು ಪತ್ತೆ ಹಚ್ಚಿ ಪೊಲೀಸ್ ಠಾಣೆ / ನ್ಯಾಯಾಲಯಗಳಲ್ಲಿ 04 ಮೊಕದ್ದಮೆಗಳನ್ನು ದಾಖಲಿಸಲಾಗಿದೆ ಹಾಗೂ ಮರಳು ಮಿಶ್ರಿತ ಮಣ್ಣನ್ನು ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದ 07 ಟ್ರ್ಯಾಕ್ಟರ್‌ಗಳಿಂದ ರೂ.2,25,950/-ಗಳ ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದೆ.

ಮುಂದುವರೆದು, ಕಳೆದ 03 ವರ್ಷಗಳಲ್ಲಿ ಕೊಪ್ಪಳ ಜಿಲ್ಲೆ ವ್ಯಾಪ್ತಿಯಲ್ಲಿ ಅಕ್ರಮ ಮರಳು ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನಿನ ಸಂಬಂಧ ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ಸದರಿಯವರ ವಿರುದ್ಧ ಎಂ.ಎಂ. (ಡಿ & ಆರ್) ಕಾಯ್ದೆ -1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮಗಳಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದ್ದು ವಿವರ ಕೆಳಕಂಡಂತಿದೆ:

**ಅನಧಿಕೃತ ಮರಳು ಗಣಿಗಾರಿಕೆ/ ಸಾಗಾಣಿಕೆ ವಿರುದ್ಧ ಕೈಕೊಂಡ ಕ್ರಮ :-**

| ಕ್ರ. ಸಂ. | ವರ್ಷ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1 | 2023-24 | 429 | 121.70 | 97 |
| 2 | 2024-25 | 164 | 40.20 | 43 |
| 3 | 2025-26 **(ನವೆಂಬರ್ ಮಾಹೆಯವರೆಗೆ)** | 133 | 73.93 | 23 |
| 4 | ಒಟ್ಟು | 726 | 235.83 | 163 |

ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿದೆ.

ಸದರಿ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.

ಈ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿಯಲ್ಲಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು-**1994** ರ ನಿಯಮ-**31-R**ರ ಉಪ ನಿಯಮ-**12** ರಂತೆ ಕ್ರಮ ವಹಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿದೆ. ಅದರನ್ವಯ ಅಕ್ರಮ ಗಣಿಗಾರಿಕೆ, ದಾಸ್ತಾನು ಮತ್ತು ಸಾಗಾಣಿಕೆ ಕಂಡುಬಂದಲ್ಲಿ ಸಮಿತಿಯ ಸದಸ್ಯ ಇಲಾಖೆಯವರು ದಂಡನೆಯನ್ನು ವಿಧಿಸುತ್ತಾರೆ ಹಾಗೂ ಮೊಕದ್ದಮೆಗಳನ್ನು ದಾಖಲಿಸಲು ಕ್ರಮವಹಿಸಲಾಗುತ್ತಿದೆ.

ಕೊಪ್ಪಳ ಜಿಲ್ಲೆಯ ಕನಕಗಿರಿ, ಬಂಕಾಪುರ ಹಾಗೂ ಕರಡಿಗುಡ್ಡ ಗ್ರಾಮಗಳ ವ್ಯಾಪ್ತಿಯಲ್ಲಿ ಆಗಿಂದಾಗ್ಗೆ ಪರಿಶೀಲನೆ ಕೈಗೊಳ್ಳುತ್ತಿದ್ದು, ಅಕ್ರಮವಾಗಿ ಮರಳು ಮಿಶ್ರಿತ ಮಣ್ಣು, ಮರಳು, ಕಲ್ಲು ಹಾಗೂ ಇನ್ನಿತರೆ ಖನಿಜಗಳ ಗಣಿಗಾರಿಗೆ, ದಾಸ್ತಾನು ಮತ್ತು ಸಾಗಾಣಿಕೆಯ ಬಗ್ಗೆ ನಿಯಮಾನುಸಾರ ಕ್ರಮ ಜರುಗಿಸಲಾಗುತ್ತಿದೆ.

ಸಂಖ್ಯೆ: ಸಿಐ-ಎಂಎಂಎನ್/354/2025

**(ಎಸ್.ಎಸ್.ಮಲ್ಲಿಕಾರ್ಜುನ್)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.